# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ ಸಂಖ್ಯೆ.29 ಕಾಚರಕನಹಳ್ಳಿಗೆ ಸಂಬಂಧಿಸಿದಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಕುವೆಂಪು ಪಾರ್ಕ್ ಪಕ್ಕದಲ್ಲಿರುವ ಪಾಲಿಕೆ ಕಟ್ಟಡದಲ್ಲಿ ದಿನಾಂಕ: 05-02-2022 ರಂದು ನಡೆದ ವಾರ್ಡ್ ಕಮಿಟಿ ಸಭೆಯ ನಡವಳಿಗಳು

**ಹಾಜರಿದ್ದ ಸದಸ್ಯರು,**

1. ಶ್ರೀ ಪ್ರಸನ್ನಕುಮಾರ್ ಪ್ರವೀಣ್ ಎ, ಅಧ್ಯಕ್ಷರು, ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು,
2. ಶ್ರೀ ಹೆಚ್.ವಿ.ಕೃಷ್ಣಾರೆಡ್ಡಿ, ಸದಸ್ಯ ಕಾರ್ಯದರ್ಶಿ ಮತ್ತು ಸಂಚಾಲಕರು,
3. ಡಾ॥ ರಾಣಿ, ವೈದ್ಯಾಧಿಕಾರಿಗಳ ಕಛೇರಿ ವಾರ್ಡ್ ಸಂಖ್ಯೆ.29.
4. ಶ್ರೀ ಹನುಮಂತಪ್ಪ, ಹಿರಿಯ ಆರೋಗ್ಯ ನಿರೀಕ್ಷಕರು ಹಾಗೂ ಸದಸ್ಯರು,
5. ಶ್ರೀ ಪ್ರಸನ್ನ, ಸದಸ್ಯರು, ಹೆಚ್.ಬಿ.ಆರ್ ಬಡಾವಣೆ ಅಸೋಸಿಯೇಷನ್(ರಿ)
6. ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ)

**ಹಾಜರಿದ್ದ ಅಧಿಕಾರಿಗಳು**

1. ಶ್ರೀ ರಾಜಶೇಖರ್, ಕಂದಾಯ ನಿರೀಕ್ಷಕರು,
2. ಶ್ರೀ ರಾಜೇಶ್, ಕಿರಿಯ ಆರೋಗ್ಯ ನಿರೀಕ್ಷಕರು,
3. ಕುಮಾರಿ ರಜನಿ, ಇಂಜಿನಿಯರ್, ಬಿಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ,
4. ಮಾರ್ಷಲ್, ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ,
5. ಸಹಾಯಕ ಸಬ್ ಇನ್ಸ್‌ಪೆಕ್ಟರ್ (ಸಂಚಾರ ಮತ್ತು ಕಾನೂನು ಮತ್ತು ಸುವ್ಯವಸ್ಥೆ) ಬಾಣಸವಾಡಿ ಪೋಲೀಸ್ ಠಾಣೆ,
6. ಶ್ರೀ ಪುಟ್ಟಸ್ವಾಮಿ, ಬೆಸ್ಕಾಂ ಇಲಾಖೆ,
7. ಶ್ರೀಮತಿ ರಾಜೇಶ್ವರಿ, ಕಲ್ಯಾಣ ಇಲಾಖೆ,
8. ಶ್ರೀ ವೆಂಕಟೇಶ್, ತೋಟಗಾರಿಕೆ ಇಲಾಖೆ,
9. ಕಿರಿಯ/ಸಹಾಯಕ ಅಭಿಯಂತರರು, ಬೆಸ್ಕಾಂ ಇಲಾಖೆ,

ವಾರ್ಡ್ ಸಮಿತಿಯ ಪ್ರಾಸ್ತಾವಿಕ ಸಭೆಯ ಉದ್ದೇಶವನ್ನು ತಿಳಿಸಿ, ಸಭೆಯಲ್ಲಿ ಉಪಸ್ಥಿತರಿದ್ದ ಅಧ್ಯಕ್ಷರು ಸದಸ್ಯರು ಹಾಗೂ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ನಡೆಸಲು ವಾರ್ಡ್ ಸಮಿತಿ ಅಧ್ಯಕ್ಷರನ್ನು ಕೋರಲಾಯಿತು.

**ಸಭೆಯ ನಡವಳಿಗಳು**

1) **ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ)** ರವರು ಮಾತನಾಡಿ, ನೀಲಗಿರಿ ರಸ್ತೆ 6ನೇ ಅಡ್ಡರಸ್ತೆಯಲ್ಲಿ ಚರಂಡಿಯಲ್ಲಿ ಹೂಳು ತೆಗೆಯುವುದು, ಮೋರಿಗಳ ಅಭಿವೃದ್ಧಿ ಕಾಮಗಾರಿ ನಡೆಯುತ್ತಿರುವುದರಿಂದ ಸ್ಥಳೀಯ ಸಾರ್ವಜನಿಕರಿಗೆ ಅನೇಕ ತಿಂಗಳುಗಳಿಂದ ಇದ್ದ ಸಮಸ್ಯೆ ಬಗೆಹರಿದಿರುತ್ತದೆ ಮತ್ತು ಸ್ಥಳೀಯ ಕಾಮಗಾರಿ ಸ್ಥಳದಲ್ಲಿ ಇನ್ನೂ ಸ್ವಲ್ಪ ಅನುಪಯುಕ್ತ ಮಣ್ಣು ಇದ್ದು, ಅದನ್ನು ಕೂಡಲೇ ಸಾಗಾಣಿಕೆ ಮಾಡಲು ಸಭೆಯಲ್ಲಿ ಪ್ರಸ್ತಾಪಿಸಿದಾಗ, ಸಭೆಯಲ್ಲಿ ಹಾಜರಿದ್ದ ಕಾಮಗಾರಿ ಇಲಾಖೆಯ ಅಭಿಯಂತರರು ಕೂಡಲೇ ಅನುಪಯುಕ್ತ ಮಣ್ಣನ್ನು ಸಾಗಾಣಿಕೆ ಮಾಡಲಾಗುವುದೆಂದು ಸಭೆಗೆ ತಿಳಿಸಿದರು.

2) <u>ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ)</u> ರವರು ಮಾತನಾಡಿ, ಕಮ್ಮನಹಳ್ಳಿ ಮುಖ್ಯರಸ್ತೆ, 5ನೇ ಮುಖ್ಯರಸ್ತೆ ಹಾಗೂ ನೆಹರು ರಸ್ತೆಗಳ ಪಾದಾಚಾರಿ ಮಾರ್ಗದಲ್ಲಿ ಅಳವಡಿಸಿರುವ ಟೈಲ್ಸ್‌ಗಳು ಅಲ್ಲಲ್ಲಿ ಕುಸಿದಿದ್ದು, ಅವುಗಳನ್ನು ಸರಿಪಡಿಸಿ, ಸಾರ್ವಜನಿಕ ಓಡಾಟಕ್ಕೆ ಅನುವು ಮಾಡಿಕೊಡಲು ಸಭೆಯಲ್ಲಿ ಪ್ರಸ್ತಾಪಿಸಿದಾಗ, ಸಭೆಯಲ್ಲಿ ಹಾಜರಿದ್ದ ಕಾಮಗಾರಿ ಇಲಾಖೆಯ ಅಭಿಯಂತರರು, ಈಗಾಗಲೇ ಸದರಿ ಕಾಮಗಾರಿಗಾಗಿ ಟೆಂಡರ್ ಕರೆಯಲಾಗಿದ್ದು, ಟೆಂಡರ್ ಪ್ರಕ್ರಿಯೆ ಮುಗಿದ ನಂತರ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗುವುದು ಎಂದು ಸಭೆಗೆ ತಿಳಿಸಿದರು.

3) <u>ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ)</u> ರವರು ಮಾತನಾಡಿ, ಸಿ.ಎಂ.ಆರ್ ರಸ್ತೆ, ಸಿ.ಎಂ.ಆರ್ ಸರ್ಕಲ್‌ನಲ್ಲಿ ಮ್ಯಾನ್‌ಹೋಲ್ ಚೇಂಬರ್ ಶಿಥಿಲಗೊಂಡಿದ್ದು, ಸಾರ್ವಜನಿಕ ಓಡಾಟಕ್ಕೆ ತೊಂದರೆಯಾಗಿರುತ್ತದೆ ಎಂದು ಸಭೆಯಲ್ಲಿ ಪ್ರಸ್ತಾಪಿಸಿದಾಗ, ಸಭೆಯಲ್ಲಿ ಹಾಜರಿದ್ದ ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಭಿಯಂತರರು ಕೂಡಲೇ ಸ್ಥಳ ತನಿಖೆ ಮಾಡಿ ಕ್ರಮ ಕೈಗೊಳ್ಳುವುದಾಗಿ ಸಭೆಗೆ ತಿಳಿಸಿದರು.

4) <u>ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ)</u> ರವರು ಮಾತನಾಡಿ, ರಾಮಯ್ಯ ಬಡಾವಣೆಯಲ್ಲಿ ಎತ್ತರದ ಮರಗಳನ್ನು ಟ್ರಿಮ್ ಮಾಡಬೇಕಾಗಿರುತ್ತದೆ ಎಂದು ಸಭಾ ಗಮನಕ್ಕೆ ತಂದಾಗ, ಸಭೆಯಲ್ಲಿ ಅರಣ್ಯಾಧಿಕಾರಿಗಳು, ಬಿಬಿಎಂಪಿ ರವರಿಗೆ ಕೂಡಲೇ ಸಂಪರ್ಕಿಸಲು ಸಭೆಯಲ್ಲಿ ಹಾಜರಿದ್ದ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

5) <u>ಶ್ರೀ ಪ್ರಸನ್ನ, ಸದಸ್ಯರು, ಹೆಚ್.ಬಿ.ಆರ್ ಬಡಾವಣೆ ಅಸೋಸಿಯೇಷನ್(ರಿ)</u> ರವರು ಮಾತನಾಡಿ, ರಾಮ ದೇವಸ್ಥಾನ ರಸ್ತೆಯಲ್ಲಿ ಕೂಲಿ ಕಾರ್ಮಿಕರು ನೂರಾರು ಸಂಖ್ಯೆಯಲ್ಲಿ ಬೆಳಗಿನ ಸಮಯದಲ್ಲಿ ಜಮಾವಣೆಯಾಗುತ್ತಾರೆ. ಇದರಿಂದ ಸಾರ್ವಜನಿಕ ಸಂಚಾರಕ್ಕೆ ಅಡಚಣೆಯಾಗಿರುತ್ತದೆ ಮತ್ತು ಸಂಚಾರಿ ಪೊಲೀಸರು ಸದರಿ ರಸ್ತೆಯಲ್ಲಿ ಯಾವುದೇ ಪಾರ್ಕಿಂಗ್ ಫಲಕಗಳನ್ನು ಅಳವಡಿಸಿರುವುದಿಲ್ಲ ಎಂದು ಸಭಾ ಗಮನಕ್ಕೆ ತಂದಾಗ ಸಭೆಯಲ್ಲಿ ಹಾಜರಿದ್ದ, ಸಂಚಾರಿ ಪೊಲೀಸ್ ಅಧಿಕಾರಿಗಳು ಕೂಡಲೇ ಕ್ರಮ ವಹಿಸುವುದಾಗಿ ಸಭೆಗೆ ತಿಳಿಸಿದರು.

6) <u>ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ)</u> ರವರು ಮಾತನಾಡಿ, ವಾರ್ಡ್ ಪ್ರದೇಶದ ರಿಂಗ್ ರಸ್ತೆಯಿಂದ ಆಯಿಲ್ ಮಿಲ್ ರಸ್ತೆಯ ವರೆಗೆ ಅನೇಕ ಶಾಲಾ ಕಾಲೇಜುಗಳು ಇದ್ದು, ಶಾಲಾ ಕಾಲೇಜುಗಳ ಪ್ರಾರಂಭದ ಸಮಯ ಹಾಗೂ ಶಾಲೆ ಮುಕ್ತಾಯದ ಸಮಯದಲ್ಲಿ ರಸ್ತೆಯಲ್ಲಿ ಭಾರಿ ಜನ ಜಂಗುಳಿಯಾಗುತ್ತಿದ್ದು, ಇದರಿಂದ ರಸ್ತೆಯಲ್ಲಿ ಸಂಚರಿಸುವ ಸಾರ್ವಜನಿಕರಿಗೆ ಹಾಗೂ ಶಾಲಾ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿರುತ್ತದೆ. ಆದ್ದರಿಂದ ಈ ಸಮಯಗಳಲ್ಲಿ ಪೊಲೀಸ್ ಗಸ್ತನ್ನು ಹೆಚ್ಚಿಸಲು ಸಭಾ ಗಮನಕ್ಕೆ ತಂದಾಗ ಸಭೆಯಲ್ಲಿ ಹಾಜರಿದ್ದ ಪೊಲೀಸ್ ಅಧಿಕಾರಿಗಳು ಈ ಬಗ್ಗೆ ಕ್ರಮ ಕೈಗೊಳ್ಳುವುದಾಗಿ ಸಭೆಗೆ ತಿಳಿಸಿದರು.

7) <u>ಡಾ॥ ರಾಣಿ, ವೈದ್ಯಾಧಿಕಾರಿಗಳ ಕಛೇರಿ ವಾರ್ಡ್ ಸಂಖ್ಯೆ.29 ರವರು ಮಾತನಾಡಿ,</u> ಪ್ರಸ್ತುತ ವಾರ್ಡ್ ಪ್ರದೇಶದಲ್ಲಿ ಒಟ್ಟು 57 ಕೋವಿಡ್ ಸೋಂಕಿತ ಪ್ರಕರಣಗಳಿದ್ದು, ಈ ಪೈಕಿ 02 ಪ್ರಕರಣಗಳು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುತ್ತಾರೆ ಹಾಗೂ ಆರ್.ಟಿ.ಪಿ.ಸಿ.ಆರ್ ಹಾಗೂ ರ್‍ಯಾಪಿಡ್ ಪರೀಕ್ಷೆಗಳನ್ನು ನಿರಂತರವಾಗಿ ಸಾರ್ವಜನಿಕರಿಗೆ ಒಟ್ಟು 58300 ಪರೀಕ್ಷೆಗಳನ್ನು ಮಾಡಲಾಗಿರುತ್ತದೆ. ಹಾಗೂ ವಾರ್ಡ್ ವ್ಯಾಪ್ತಿಯಲ್ಲಿ ಒಟ್ಟು ವ್ಯಾಕ್ಸಿನೇಷನ್ 56000 ಜನರಿಗೆ ಲಸಿಕೆ ನೀಡಲಾಗಿರುತ್ತದೆ ಎಂದು ಸಭೆಗೆ ತಿಳಿಸಿದರು.

ಕೊನೆಯದಾಗಿ ಮಾನ್ಯ ಅಧ್ಯಕ್ಷರು ಮಾತನಾಡಿ, ಇಂದಿನ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಿರುವ ಎಲ್ಲಾ ನಿರ್ಣಯಗಳ ಬಗ್ಗೆ ಕೂಡಲೇ ಕ್ರಮ ಕೈಗೊಳ್ಳಲು ಆದೇಶಿಸಿ, ಸಭೆಯನ್ನು ಮುಕ್ತಾಯಗೊಳಿಸಿದರು.

ವಾರ್ಡ್ ಸಮಿತಿ ಸದಸ್ಯ ಕಾರ್ಯದರ್ಶಿಗಳು
ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ

Prasanna Kumar A
ಅಧ್ಯಕ್ಷರು
(ನೋಡೆಲ್ ಅಧಿಕಾರಿಗಳು)
ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ

<u>ಪ್ರತಿಯನ್ನು</u>

1) ಜಂಟಿ ಆಯುಕ್ತರರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
2) ಮುಖ್ಯ ಅಭಿಯಂತರರು (ಪೂ) ರವರ ಅವಗಾಹನೆಗಾಗಿ ಸಲ್ಲಿಸಿದೆ.
3) ಕಾರ್ಯಪಾಲಕ ಅಭಿಯಂತರರು (ಸರ್ವಜ್ಞನಗರ) ರವರ ಅವಗಾಹನೆಗಾಗಿ.
4) ವಾರ್ಡ್ ಕಮಿಟಿಯ ಸದಸ್ಯರಿಗೆ.
5) ಕಛೇರಿ ಕಡತಕ್ಕೆ.